ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 30-5-2021

# ಖ್ಯಾತ ಜ್ಯೋತಿಷಿ, ಅಂಕಣಕಾರ ಬೆಜನ್ ದಾರೂವಾಲಾ ನಿಧನ

**ಅಹಮದಾಬಾದ್:** ಖ್ಯಾತ ಜ್ಯೋತಿಷಿ ಬೆಜನ್ ದಾರೂವಾಲಾ (90) ಅವರು ನಗರದ ಅಪೋಲೊ ಆಸ್ಪತ್ರೆಯಲ್ಲಿ ಶುಕ್ರವಾರ ನಿಧನ ಹೊಂದಿದ್ದಾರೆ.



ದಾರೂವಾಲಾ ಅವರಿಗೆ ಕೊರೊನಾ ಸೋಂಕು ತಗುಲಿತ್ತು ಎಂಬ ವರದಿಗಳನ್ನು ಅಲ್ಲಗಳೆದಿರುವ ಅವರ ಪುತ್ರ ನಸ್ತೂರ್ ದಾರೂವಾಲಾ ಅವರು, ''ನಮ್ಮ ತಂದೆ ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದರು. ಕೆಲವು ದಿನಗಳಿಂದ ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿತ್ತು. ನ್ಯುಮೋನಿಯಾದಿಂದ ಮೃತಪಟ್ಟಿದ್ದಾರೆ,'' ಎಂದು ಹೇಳಿದ್ದಾರೆ.

ಪಾರ್ಸಿ ಕುಟುಂಬದಲ್ಲಿ ಜನಿಸಿದ್ದ ದಾರೂವಾಲಾ ಅವರು ಗಣಪತಿಯ ಆರಾಧಕರಾಗಿದ್ದರು. ಅವರು ಜ್ಯೋತಿಷ್ಯ ಅಂಕಣಕಾರರಾಗಿ 'ದಿ ಟೈಮ್ಸ್ ಆಫ್ ಇಂಡಿಯಾ' ಸೇರಿ ವಿಶ್ವಾದ್ಯಂತ ಅನೇಕ ಆಂಗ್ಲ ಪತ್ರಿಕೆಗಳು ಹಾಗೂ ನಿಯತಕಾಲಿಕೆಗಳಲ್ಲಿ ಮಿಂಚಿದ್ದರು. ಟಿವಿ ಚಾನೆಲ್‌ಗಳಲ್ಲೂ ಕಾರ್ಯಕ್ರಮ ನೀಡಿದ್ದರು. ವೇದಿಕ್ ಜ್ಯೋತಿಷ್ಯ, ಸಂಖ್ಯಾಶಾಸ್ತ್ರ, ಹಸ್ತ ಸಾಮುದ್ರಿಕಾ, ಐ ಚಿಂಗ್, ಟಾರೋ, ಕಬಲಾ, ಪಾಶ್ಚಿಮಾತ್ಯ ಜ್ಯೋತಿಷ್ಯ ಪದ್ಧತಿಗಳನ್ನು ಅಭ್ಯಸಿಸಿದ್ದರು.

**ಪ್ರಧಾನಿಗಳ ಭವಿಷ್ಯ:** ತಮ್ಮ ಉತ್ತಮ ಭವಿಷ್ಯ ಅರಸಿ ಉದ್ಯಮಿಗಳು, ರಾಜಕಾರಣಿಗಳು ಇವರ ಬಳಿ ಸಲಹೆ ಪಡೆಯುತ್ತಿದ್ದರು. ಮೊರಾರ್ಜಿ ದೇಸಾಯಿ, ಅಟಲ್ ಬಿಹಾರಿ ವಾಜಪೇಯಿ ಹಾಗೂ ನರೇಂದ್ರ ಮೋದಿ ಪ್ರಧಾನಿಯಾಗಲಿದ್ದಾರೆಂಬ ವಿಚಾರದಲ್ಲಿ ಇವರ ಭವಿಷ್ಯವಾಣಿ ನಿಜವಾಗಿದೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಹತ್ಯೆ, ಸಂಜಯ್ ಗಾಂಧಿ ಅವರ ಅಪಘಾತ ಮತ್ತು ಗುಜರಾತ್‌ನ ಕಛ್ ಭೂಕಂಪದ ಬಗ್ಗೆಯೂ ಭವಿಷ್ಯ ನುಡಿದಿದ್ದರು.

**ಸಂತಾಪ:** ಬೆಜನ್ ದಾರೂವಾಲಾ ಅವರ ನಿಧನಕ್ಕೆ ಗುಜರಾತ್ ಸಿಎಂ ವಿಜಯ್ ರೂಪಾನಿ ಸೇರಿ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.